## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2014-15ನೇ ಸಾಲಿನ ಕೇಂದ್ರ ಪುರಸ್ಕೃತ ಯೋಜನೆಯಾದ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ (ಆರ್.ಜಿ.ಪಿ.ಎಸ್.ಎ) ಯೋಜನೆಯಡಿ ಬಳ್ಳಾರಿ ಜಿಲ್ಲೆಯ ಹಡಗಲಿ ತಾಲ್ಲೂಕಿನ ಬೀರಬ್ಬಿ ಹಾಗೂ ಹಗರಿಬೊಮ್ಮನ ಹಳ್ಳಿ ತಾಲ್ಲೂಕಿನ ಗದ್ದೀಕೆರೆ ಗ್ರಾಮ ಪಂಚಾಯತಿಗಳಿಗೆ ಹೊಸ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 139 ಜಿಪಸ 2012(ಪಿ-3) ದಿನಾಂಕ:25-07-2013.
2. ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯ, ನವದೆಹಲಿರವರ ಆದೇಶ ಸಂಖ್ಯೆ: ಕೆ-11011/02/2014-DPE RGPSA [(I)24-09-2014)] ಮತ್ತು (II), (III),(IV),(V) &(VI) ದಿನಾಂಕ:26-09-2014.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 182 ಜಿಪಸ 2014(ಪಿ-2), ದಿನಾಂಕ:14-11-2014.
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014(ಪಿ-2), ದಿನಾಂಕ:28-11-2014
5. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014(ಪಿ-2), ದಿನಾಂಕ:03-02-2015.
6. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014(ಪಿ-2), ದಿನಾಂಕ:20-03-2015.
7. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014(ಪಿ-2), ದಿನಾಂಕ:23-06-2015.
8. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014(ಪಿ-2), ದಿನಾಂಕ:24-06-2015.

ಪ್ರಸ್ತಾವನೆ:

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಷ್ಟ್ರದಾದ್ಯಂತ ಅನುಷ್ಠಾನಗೊಳಿಸುತ್ತಿರುವ e-PANCHAYAT, ಪಂಚಾಯತ್ ಎಂಪವರ್‌ಮೆಂಟ್ ಅಂಡ್ ಅಕೌಂಟಬಿಲಿಟಿ ಇನ್ಸೆಂಟೀವ್ ಸ್ಕೀಮ್ (PEAIS) ಹಾಗೂ ಪಂಚಾಯತ್ ಮಹಿಳಾ ಏವಂ ಯುವಶಕ್ತಿ ಅಭಿಯಾನ (PMEYSA) ಯೋಜನೆಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದ ಸಾಮರ್ಥ್ಯಾಭಿವೃದ್ಧಿ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಸಮ್ಮಿಳನಗೊಳಿಸಿ, ಪಂಚಾಯತ್ ರಾಜ್ ಸಂಸ್ಥೆಗಳನ್ನು ಹಾಗೂ ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿಯನ್ನು ಬಲಪಡಿಸುವ ಉದ್ದೇಶದಿಂದ 2012-13ನೇ ಸಾಲಿನಿಂದ ನೂತನ ಯೋಜನೆ, ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆಯನ್ನು ಕೇಂದ್ರ ಸರ್ಕಾರವು ಜಾರಿಗೊಳಿಸಿದೆ.

ಮೇಲೆ ಓದಲಾದ ಉಲ್ಲೇಖ(1)ರಲ್ಲಿನ ಸರ್ಕಾರದ ಆದೇಶದಲ್ಲಿ ಈ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ. ಈ ಆದೇಶದ ಅನ್ವಯ ಯೋಜನಾ ವೆಚ್ಚವನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು 75:25ರ ಪ್ರಮಾಣದಲ್ಲಿ ಭರಿಸಬೇಕಾಗಿದೆ. 2014-15ನೇ ಸಾಲಿಗೆ ಕೇಂದ್ರ ಸರ್ಕಾರವು ತನ್ನ ಪಾಲಿನ ಅನುದಾನದ ಮೊತ್ತವನ್ನು ಮೇಲೆ ಓದಲಾದ ಉಲ್ಲೇಖ(2)ರ ಪತ್ರಗಳಲ್ಲಿ ರಾಜ್ಯ ಸರ್ಕಾರಕ್ಕೆ ವಿವಿಧ ಚಟುವಟಿಕೆಗಳಿಗಾಗಿ ಅನುದಾನವನ್ನು ಬಿಡುಗಡೆಗೊಳಿಸಿದೆ.

2014-15ನೇ ಸಾಲಿಗೆ ಯೋಜನೆಯ ಒಟ್ಟಾರೆ ವೆಚ್ಚದ ಮೊತ್ತ 16009.76 ಲಕ್ಷಗಳಾಗಿದ್ದು, ಇದರಲ್ಲಿ ಕೇಂದ್ರದ ಪಾಲು 12007.32ಲಕ್ಷ ಹಾಗೂ ರಾಜ್ಯದ ಪಾಲು ರೂ.4002.44 ಲಕ್ಷಗಳಾಗಿರುತ್ತದೆ. ಕೇಂದ್ರ ಪಾಲಿನ ಮೊದಲನೆಯ ಕಂತಿನ ಅನುದಾನದ ಮೊತ್ತ ರೂ.6003.66 ಲಕ್ಷಗಳಲ್ಲಿ ರಾಜ್ಯ ಸರ್ಕಾರಕ್ಕೆ ರೂ.4680.61 ಲಕ್ಷಗಳನ್ನು ಬಿಡುಗಡೆಗೊಳಿಸಿರುತ್ತದೆ. ಪ್ರಸ್ತುತ ಕೇಂದ್ರದ ಪಾಲಿನ ವಂತಿಗೆಯನ್ನು, ವರ್ಗೇತರ (NON-SC ಮತ್ತು ST) ಯೋಜನೆ, ವಿಶೇಷ ಘಟಕ (SC) ಯೋಜನೆ ಮತ್ತು ವಿಶೇಷ ಗಿರಿಜನ (ST) ಯೋಜನೆಗಳಿಗಾಗಿ 2014-15ನೇ ಸಾಲಿನ ಕೇಂದ್ರ ಸರ್ಕಾರವು ಕರ್ನಾಟಕ ರಾಜ್ಯಕ್ಕೆ ನೀಡಲು ನಿರ್ಧರಿಸಿ ಅನುಕ್ರಮವಾಗಿ ರೂ. 33,23,23,310/-, ರೂ.9,36,12,200/- ಮತ್ತು ರೂ.4,21,25,490/- ಒಟ್ಟಾರೆ ರೂ.46,80,61,000/- ಗಳನ್ನು ಬಿಡುಗಡೆಗೊಳಿಸಿದ್ದು, ರಾಜ್ಯದ ಆರ್ಥಿಕ ಇಲಾಖೆಯು ಜಮಾ ದೃಢೀಕರಣ ಪತ್ರವನ್ನು ನೀಡಿರುತ್ತದೆ ಹಾಗೂ ರಾಜೀವ್ ಗಾಂಧಿ

ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆ ಅನುದಾನದ ಲೆಕ್ಕಶೀರ್ಷಿಕೆ 2515-00-101-0-31 (ಯೋಜನೆ)ರಡಿ ಸ್ವೀಕೃತಗೊಂಡಿರುತ್ತದೆ.

ಉಲ್ಲೇಖ(4)ರ ಮೂಲಕ ಕೇಂದ್ರ ಸರ್ಕಾರದಿಂದ ಈ ಯೋಜನೆಯ ಉದ್ದೇಶಕ್ಕಾಗಿ ಮೊದಲನೆಯ ಕಂತಿನ ಬಾಬ್ತಿನ ಮೊತ್ತ ರೂ.46,80,61,000/- ಗಳನ್ನು ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆ ಅನುದಾನದ ಲೆಕ್ಕಶೀರ್ಷಿಕೆ 2515-00-101-0-31 (ಯೋಜನೆ)ರಡಿಯಿಂದ ಬಿಡುಗಡೆಗೊಳಿಸಲಾಗಿದೆ. ಈ ಅನುದಾನಕ್ಕೆ ಸಮವರ್ತಿಯಾಗಿ ರಾಜ್ಯ ಸರ್ಕಾರದ ಪಾಲಿನ ಶೇಕಡಾ 25ರಷ್ಟರ ಮೊತ್ತ ರೂ.15,60,20,000/-ಗಳನ್ನು ಬಿಡುಗಡೆಗೊಳಿಸಿದೆ. ಈ ಯೋಜನೆಯ ಉದ್ದೇಶಕ್ಕಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಅನುದಾನಗಳ ಒಟ್ಟಾರೆ ಮೊತ್ತ ರೂ. 62,40,81,000/-ಗಳಾಗಿರುತ್ತದೆ.

ರಾಜ್ಯದಲ್ಲಿ ಸ್ವಂತ ಕಟ್ಟಡ ಇಲ್ಲದಿರುವ ಉಲ್ಲೇಖ(4) (5) (6) (7) ಮತ್ತು (8)ರ ಆದೇಶಗಳ ಮೂಲಕ ಒಟ್ಟು 170 ಗ್ರಾಮ ಪಂಚಾಯತಿಗಳಿಗೆ ಹೊಸ ಕಟ್ಟಡಗಳ ನಿರ್ಮಾಣಕ್ಕಾಗಿ ಈ ಯೋಜನೆಯಡಿ ತಲಾ ರೂ. 15,00,000/- ಗಳಂತೆ ಒಟ್ಟಾರೆ ರೂ.25,50,00,000/- ಗಳನ್ನು ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆ ಅನುದಾನದಿಂದ ಬಿಡುಗಡೆಗೊಳಿಸಲಾಗಿದೆ. ಮುಂದುವರೆದು ಈಗಾಗಲೇ ಭಾರತ ಸರ್ಕಾರದಿಂದ ಅನುಮೋದನೆಗೊಂಡಿದ್ದ ಹಾವೇರಿ ಜಿಲ್ಲೆಯ ಹಿರೇಕೆರೂರು ಹಾಗೂ ಬ್ಯಾಡಗಿ ತಾಲ್ಲೂಕುಗಳು ಎಂದಷ್ಟೆ ತಪ್ಪಾಗಿ ಬೆರಳಚ್ಚುಯಾಗಿದ್ದು, ಅನುಮೋದಿತ ಪಟ್ಟಿಯಲ್ಲಿ ಗ್ರಾಮ ಪಂಚಾಯತಿಗಳ ಹೆಸರೇ ನಮೂದಾಗಿರಲಿಲ್ಲ. ಆದುದರಿಂದ ಕೇವಲ ತಾಲ್ಲೂಕು ಪಂಚಾಯತಿಗಳ ಹೆಸರುಗಳಲ್ಲಿ ಮಂಜೂರಾಗಿದ್ದ ತಲಾ ರೂ. 15,00,000/-ಗಳ ಹಾಗೆ ಒಟ್ಟು ರೂ. 30.00 ಲಕ್ಷಗಳನ್ನು ಬಿಡುಗಡೆಗೊಳಿಸಿರಲಿಲ್ಲ. ಸದರಿ ಅನುದಾನದ ಮೊತ್ತವನ್ನು ಹೊಸ ಗ್ರಾಮ ಪಂಚಾಯತಿಗಳನ್ನಾಗಿ ಘೋಷಣೆ ಮಾಡಿರುವ ಬಳ್ಳಾರಿ ಜಿಲ್ಲೆಯ ಹಡಗಲಿ ತಾಲ್ಲೂಕಿನ ಬೀರಬ್ಬಿ ಹಾಗೂ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಗದ್ದೀಕೆರೆ ಗ್ರಾಮ ಪಂಚಾಯತಿಗಳ ಹೊಸ ಗ್ರಾಮ ಪಂಚಾಯತಿ ಕಟ್ಟಡ ನಿರ್ಮಾಣಕ್ಕೆ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ನಿರ್ಧರಿಸಿದೆ. ಅದಕ್ಕಾಗಿ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014(ಪಿ-2), ಬೆಂಗಳೂರು, ದಿನಾಂಕ:09-07-2015.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, ಭಾರತ ಸರ್ಕಾರದಿಂದ ಅನುಮೋದನೆಗೊಂಡಿದ್ದ ಹಾವೇರಿ ಜಿಲ್ಲೆಯ ಹಿರೇಕೆರೂರು ಹಾಗೂ ಬ್ಯಾಡಗಿ ತಾಲ್ಲೂಕುಗಳು ಎಂದಷ್ಟೆ ತಪ್ಪಾಗಿ ಬೆರಳಚ್ಚುಯಾಗಿದ್ದು, ಅನುಮೋದಿತ ಪಟ್ಟಿಯಲ್ಲಿ ಗ್ರಾಮ ಪಂಚಾಯತಿಗಳ ಹೆಸರೇ ನಮೂದಾಗಿರಲಿಲ್ಲ. ಆದುದರಿಂದ ಕೇವಲ ತಾಲ್ಲೂಕು ಪಂಚಾಯತಿಗಳ ಹೆಸರುಗಳಲ್ಲಿ ಮಂಜೂರಾಗಿದ್ದ ತಲಾ ರೂ. 15,00,000/-ಗಳ ಹಾಗೆ ಒಟ್ಟು ರೂ. 30.00 ಲಕ್ಷಗಳನ್ನು ಬಿಡುಗಡೆಗೊಳಿಸಿರಲಿಲ್ಲ. ಸದರಿ ಅನುದಾನದ ಮೊತ್ತವನ್ನು ಹೊಸ ಗ್ರಾಮ ಪಂಚಾಯತಿಗಳನ್ನಾಗಿ ಘೋಷಣೆ ಮಾಡಿರುವ ಬಳ್ಳಾರಿ ಜಿಲ್ಲೆಯ ಹಡಗಲಿ ತಾಲ್ಲೂಕಿನ ಬೀರಬ್ಬಿ ಹಾಗೂ ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಗದ್ದೀಕೆರೆ ಗ್ರಾಮ ಪಂಚಾಯತಿಗಳ ಹೊಸ ಕಟ್ಟಡ ನಿರ್ಮಾಣಕ್ಕೆ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆ ಅನುದಾನದಿಂದ ಬಿಡುಗಡೆಗೊಳಿಸಲು ಆದೇಶಿಸಿದೆ. "ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)ಯೋಜನೆ"ಯ ಹೆಸರಿನಲ್ಲಿ ರಾಜ್ಯ ಸರ್ಕಾರದ ವತಿಯಿಂದ ದೇನಾ ಬ್ಯಾಂಕ್, ಇಂದಿರಾ ನಗರ ಶಾಖೆಯಲ್ಲಿ ತೆರೆಯಲಾಗಿರುವ ಉಳಿತಾಯ ಖಾತೆ ಸಂಖ್ಯೆ 052110026480 ಯಿಂದ "ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ"ದ ಕಾರ್ಪೋರೇಶನ್ ಬ್ಯಾಂಕ್, ಎಸ್.ಸಿ. ರಸ್ತೆ ಶಾಖೆಯಲ್ಲಿನ ಉಳಿತಾಯ ಖಾತೆ ಸಂಖ್ಯೆ 014401601000499(IFSC Code CORP0000144)ಗೆ ತಲಾ ರೂ. 15,00,000/- ಹಾಗೆ ಒಟ್ಟು ರೂ. 30.00 ಲಕ್ಷಗಳನ್ನು (ರೂಪಾಯಿ ಮೂವತ್ತು ಲಕ್ಷಗಳು ಮಾತ್ರ)ಗಳನ್ನು ಆನ್‌ಲೈನ್ ಮೂಲಕ ಆದೇಶಿಸಲಾಗಿದೆ.

ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

1. ಅನುದಾನವನ್ನು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಲಾಗಿದೆಯೋ, ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸುವುದು.

2. ಈ ಅನುದಾನವನ್ನು "ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ನಿಗಮ"ದ ಬೆಂಗಳೂರಿನ ಪ್ರಧಾನ ಕಛೇರಿಯ ಖಾತೆಗೆ ವರ್ಗಾಯಿಸಲಾಗಿದೆ.

3. ಪ್ರತ್ಯೇಕವಾಗಿ "ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ)" ಯೋಜನೆಯ ಹೆಸರಿನಲ್ಲಿ ಪ್ರತ್ಯೇಕ ಬ್ಯಾಂಕ್ ಖಾತೆ ತೆರೆಯುವುದು. ಈ ರೀತಿ ಪ್ರತ್ಯೇಕವಾಗಿ ತೆರೆಯಲಾದ ಬ್ಯಾಂಕ್ ಖಾತೆಯ ವಿವರಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳುಹಿಸಿಕೊಡುವುದು. ಈ ರೀತಿ ಪ್ರತ್ಯೇಕವಾಗಿ ತೆರೆಯಲಾದ ಬ್ಯಾಂಕ್ ಖಾತೆಯ ವಿವರಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳುಹಿಸಿಕೊಡುವುದು.

4. ಈ ಅನುದಾನವನ್ನು ಬಳಸಿಕೊಳ್ಳುವಾಗ ಈ ಕೆಳಕಂಡ ವಿಷಯಗಳಿಗೆ ಆದ್ಯತೆ ನೀಡುವುದು.

   ಅ. ಕಟ್ಟಡವು ಪರಿಸರ ಸ್ನೇಹಿ ರಚನೆಯನ್ನು ಹಾಗೂ ಪ್ರಕೃತಿ ವಿಕೋಪವನ್ನು ತಡೆದುಕೊಳ್ಳುವ ಸಾಮರ್ಥ್ಯವನ್ನು ಹೊಂದಿರಬೇಕು.

   ಆ. ಕಟ್ಟಡದ ಒಟ್ಟಾರೆ ನಿರ್ಮಾಣದ ವೆಚ್ಚ ಹದಿನೈದು ಲಕ್ಷ ರೂಪಾಯಿಗಳ ಮಿತಿಯಲ್ಲಿರಬೇಕು

   ಇ. ಪುರುಷರಿಗೆ ಮಹಿಳೆಯರಿಗೆ ಮತ್ತು ವಿಶೇಷಚೇತನರಿಗೆ ಪ್ರತ್ಯೇಕವಾದ ಶೌಚಾಲಯಗಳನ್ನು ನಿರ್ಮಿಸುವುದು.

   ಈ. ಈ ಮೇಲಿನ ವೆಚ್ಚಗಳನ್ನು ಭರಿಸುವ ಮುನ್ನ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಯಲ್ಲಿ ವಿಷಯವನ್ನು ಮಂಡಿಸಿ, ಸಾಮಾನ್ಯ ಸಭೆಯ ಅನುಮೊದನೆಯನ್ನು ಪಡೆಯತಕ್ಕದ್ದು.

5. ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಅನುದಾನವನ್ನು ನಿಗದಿತ ಜಿ.ಎಫ್.ಆರ್ 19–ಎ ನಮೂನೆ (ಲಗತ್ತಿಸಿದೆ) ಯಲ್ಲಿ ಹಣ ಬಳಕೆ ಪ್ರಮಾಣ ಪತ್ರವನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ನಿರ್ದೇಶಕರು (ಪಂ.ರಾಜ್) ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ಸಲ್ಲಿಸುವುದು. ಇದರ ಜೊತೆಗೆ Non-Duplication, Non-Diversion ಮತ್ತು Non-Embezzlement ಪ್ರಮಾಣ ಪತ್ರಗಳನ್ನು ಸಲ್ಲಿಸುವುದು.

6. ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯ ಕೇಂದ್ರ ಸರ್ಕಾರ ಪ್ರಾಯೋಜಿತ ತೃತೀಯ ಮಧ್ಯವರ್ತಿ(Third Party Evaluation)ಗಳಿಂದ ಎಲ್ಲಾ ಕಾಮಗಾರಿಗಳನ್ನು ಪರಿವೀಕ್ಷಿಸಲು ಹಾಗೂ ಮೌಲ್ಯಮಾಪನ ಮಾಡಲು ಈ ಆರ್ಥಿಕ ವರ್ಷದ ಅಂತ್ಯದಲ್ಲಿ ಆಗಮಿಸುವರು.

ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆದೇಶ ಸಂಖ್ಯೆ: ಎಫ್‌ಡಿ/02/ಟಿಎಫ್‌ಪಿ/2015, ದಿನಾಂಕ: 09-04-2015ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ. ರಮೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಗೆ,

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಬಳ್ಳಾರಿ.

5. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಹಗರಿಬೊಮ್ಮನಹಳ್ಳಿ ಮತ್ತು ಹಡಗಲಿ.
6. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ, ಬೀರಬ್ಬಿ ಮತ್ತು ಗದ್ದೀಕೆರೆ.
7. ಇಲಾಖಾ ವೆಬ್‌ಸೈಟ್ / ಕರ್ನಾಟಕ ವಿಕಾಸ ಮಾಸ ಪತ್ರಿಕೆ.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ನಿರ್ದೇಶಕರು (ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.